ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ

ದಿನಾಂಕ : DATE : 11/10/2019

# ಕಾರ್ಯಸೂಚಿ ಹೆಸರಲ್ಲಿ ಮೊದಲ ದಿನವೇ ಗದ್ದಲ



- ನೆರೆಗಿಂತ ಪೇಪರ್ ಮಂಡಿಸುವುದು ಮುಖ್ಯವೇನ್ರಿ: ಸಿದ್ದು
- ಕಾರ್ಯಸೂಚಿಯಂತೆ ಕಲಾಪ ನಡೆಸಲು ಮುಂದಾದ ಸ್ಪೀಕರ್ ನಡೆಗೆ ಆಕ್ರೋಶ
- ಗದ್ದಲದ ನಡುವೆಯೇ ವಿವಿಧ ವರದಿ ಮಂಡಿಸಿದ ಸರಕಾರ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ನಿರೀಕ್ಷೆಯಂತೆ ನೆರೆ ಪರಿಹಾರದ ವಿಚಾರಕ್ಕೆ ಸಂಬಂಧಿಸಿದಂತೆ ಮೊದಲ ದಿನದ ಚಳಿಗಾಲದ ಅಧಿವೇಶನದಲ್ಲಿ ಗದ್ದಲ- ಗಲಾಟೆ ಏರ್ಪಟ್ಟು, ಪ್ರತಿಪಕ್ಷ ಹಾಗೂ ಸ್ಪೀಕರ್ ನಡುವಿನ ಗುದ್ದಾಟಕ್ಕೆ ವೇದಿಕೆಯಾಯಿತು.

ಗುರುವಾರ ಸಂತಾಪ ಸೂಚನಾ ನಿರ್ಣಯದ ಬಳಿಕ ಕಾರ್ಯದರ್ಶಿ ವರದಿ ಸೇರಿದಂತೆ ವಿವಿಧ ಸಮಿತಿಗಳ ವರದಿಗಳನ್ನು ಒಪ್ಪಿಸಲು ಸ್ಪೀಕರ್ ಸೂಚಿಸಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಪ್ರತಿಪಕ್ಷಗಳು, ವರದಿಗಳ ಬದಲು ನೆರೆ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಸಲ್ಲಿಸಿರುವ ನಿಲುವಳಿ ಸೂಚಿಸಲು ಆಗ್ರಹಿಸಿದರು. ಆದರೆ ಇದಕ್ಕೆ ಸ್ಪೀಕರ್ ಒಪ್ಪದೇ ಇದ್ದಾಗ ಪ್ರತಿಪಕ್ಷಗಳು ಗದ್ದಲ ಎಬ್ಬಿಸಿದವು. ಗದ್ದಲದ ನಡುವೆಯೂ ವಿಧಾನಸಭಾ ಕಾರ್ಯದರ್ಶಿ ಸೇರಿದಂತೆ ವಿವಿಧ ಸಚಿವರು ಹಾಗೂ ಮುಖ್ಯಮಂತ್ರಿಗಳು ವಿವಿಧ ವರದಿಗಳನ್ನು ಸದನಕ್ಕೆ ಒಪ್ಪಿಸಿದರು. ಇದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಸಿದ್ದರಾಮಯ್ಯ ಅವರು, ಬರ ಮತ್ತು ನೆರೆಯಿಂದ ಅರ್ಧ ರಾಜ್ಯವೇ ಸಂಕಷ್ಟಕ್ಕೆ ಸಿಲುಕಿದೆ. ಈ ಬಗ್ಗೆ ಚರ್ಚಿಸಲು ಸಲ್ಲಿಸಿರುವ ನಿಲುವಳಿ ಸೂಚನೆಗೆ ಸಂಬಂಧಿಸಿದಂತೆ ಪ್ರಾಥಮಿಕ ಚರ್ಚೆಗೆ ಅವಕಾಶ ನೀಡುವ ಬದಲು, ವರದಿಗಳಿಗೆ ಅವಕಾಶ ನೀಡುವುದು ಸರಿಯಲ್ಲ. ಇದು ಪ್ರಜಾಪ್ರಭುತ್ವ ವಿರೋಧಿ ನಡೆಯೆಂದು ಟೀಕಿಸಿದರು.

ಪ್ರತಿಪಕ್ಷದ ಒತ್ತಾಯಕ್ಕೆ ಮಣಿಯದೇ ಕಾರ್ಯಸೂಚಿಯಂತೆ ಸದನದ ಕಲಾಪಕ್ಕೆ ಅವಕಾಶ ಕಲ್ಪಿಸಿದ ರಾಜ್ಯ ವಿಧಾನಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ನಿರ್ಧಾರವನ್ನು ಖಂಡಿಸಿದರು. ಪ್ರಶ್ನೋತ್ತರ ವೇಳೆ ಹಾಗೂ ಶೂನ್ಯ ವೇಳೆಯ ನಂತರ ನಿಯಮ 60 ರಂತೆ ಸಾರ್ವಜನಿಕ ಮಹತ್ವದ ವಿಚಾರದ ಚರ್ಚೆಗೆ ನಿಯಮಾವಳಿಗಳಲ್ಲಿ ಅವಕಾಶವಿದೆ ಎಂಬುದನ್ನು ಉಲ್ಲೇಖಿಸಿದ ಸಿದ್ದರಾಮಯ್ಯ, ದಿನದ ಕಾರ್ಯಸೂಚಿಯಲ್ಲಿ ಪ್ರಶ್ನೋತ್ತರ ವೇಳೆ ಹಾಗೂ ಶೂನ್ಯ ವೇಳೆಯ ಚರ್ಚೆ ಇಲ್ಲದಿರುವ ಹಿನ್ನೆಲೆಯಲ್ಲಿ ಸಭಾಧ್ಯಕ್ಷ ಪೀಠಕ್ಕೆ ತಾವು ಸಲ್ಲಿಸಿದ ನಿಲುವಳಿ ಸೂಚನೆ ಕುರಿತ ಪ್ರಾಥಮಿಕ ಚರ್ಚೆಗೆ ಪಟ್ಟುಹಿಡಿದರು.

## ಚರ್ಚೆಗೆ ಸಿದ್ಧ; ವರದಿ ಒಪ್ಪಿಸಲು ಅವಕಾಶ ನೀಡಿ

ಈ ವೇಳೆ ಮಧ್ಯೆ ಪ್ರವೇಶಿಸಿದ ಸಭಾನಾಯಕ ಬಿ.ಎಸ್.ಯಡಿಯೂರಪ್ಪ, ಚರ್ಚೆಗೆ ಸರಕಾರ ಸಿದ್ಧವಿದೆ. ಆದರೆ, ಕೆಲ ವರದಿಗಳನ್ನು ಮಂಡಿಸುತ್ತೇವೆ. ಇದಕ್ಕೆ ಅವಕಾಶ ನೀಡಬೇಕೆಂದು ಮನವಿ ಮಾಡಿದರು. ಇದಕ್ಕೆ ಪ್ರತಿಪಕ್ಷಗಳು ಒಪ್ಪದಿದ್ದಾಗ ಗದ್ದಲ ಏರ್ಪಟ್ಟಿತು. ಸಿದ್ದರಾಮಯ್ಯ ಅವರಿಗೆ ಮಾತನಾಡಲು ಅವಕಾಶ ನೀಡಬೇಕೆಂದು ರಮೇಶ್ ಕುಮಾರ್, ಕೃಷ್ಣ ಬೈರೇಗೌಡ ಹಾಗೂ ಎಚ್.ಕೆ.ಪಾಟೀಲ್ ಆಗ್ರಹಿಸಿದರು. ಇನ್ನು ಜೆಡಿಎಸ್ ಸದಸ್ಯರು ಬಾವಿಗಿಳಿದು ಪ್ರತಿಭಟನೆಗೆ ಮುಂದಾಗುತ್ತಿದ್ದಂತೆ, ಸ್ಪೀಕರ್ ಸದನವನ್ನು ಮಧ್ಯಾಹ್ನಕ್ಕೆ ಮುಂದೂಡಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಸಿದ್ದರಾಮಯ್ಯ, ಪ್ರಜಾಪ್ರಭುತ್ವದ ಧ್ವನಿ ಅಡಗಿಸಲು ಸಾಧ್ಯವಿಲ್ಲ ಎಂದು ಏರಿದ ಧ್ವನಿಯಲ್ಲಿ ಕೂಗಿ ಸಭಾಧ್ಯಕ್ಷರ ನಡೆಯನ್ನು ಪ್ರತಿಭಟಿಸಿದರು. ಸಭಾಧ್ಯಕ್ಷರು ಸರಕಾರದೊಂದಿಗೆ ಶಾಮೀಲಾಗಿದ್ದಾರೆ ಎಂದು ಆರೋಪಿಸಿದರು. ಇದಾವುದಕ್ಕೂ ಜಗ್ಗದ ಸಭಾಧ್ಯಕ್ಷರು ಕಾರ್ಯಸೂಚಿಯಂತೆ ಕಲಾಪವನ್ನು ಮುಂದುವರಿಸಿದರು.

## 5 ದಿನ ವಿಸ್ತರಿಸಲು ಆಗ್ರಹ

ಇನ್ನು ಗಲಾಟೆಯಿಂದ ಸದನವನ್ನು ಮುಂದೂಡಿದ ಬಳಿಕ ನಡೆದ ಬಿಎಸಿ ಸಭೆಯಲ್ಲಿ ಪ್ರತಿಪಕ್ಷದ ನಾಯಕರು, ನೆರೆಯಿಂದ ರಾಜ್ಯದಲ್ಲಿ ಗಂಭೀರ ಸಮಸ್ಯೆ ಎದುರಾಗಿದೆ. ಆದ್ದರಿಂದ ಕಲಾಪವನ್ನು ಐದು ದಿನ ಮುಂದುವರಿಸಬೇಕು ಎನ್ನುವ ಆಗ್ರಹವನ್ನು ಮಾಡಿದ್ದಾರೆ. ಆದರೆ ಇದಕ್ಕೆ ಮುಖ್ಯಮಂತ್ರಿ ಯಡಿಯೂರಪ್ಪ ಹಾಗೂ ಸ್ಪೀಕರ್ ಒಪ್ಪಿಲ್ಲ ಎನ್ನುವ ಮಾತುಗಳು ಕೇಳಿಬಂದಿದೆ. ಆದ್ದರಿಂದ ಶುಕ್ರವಾರವೇ ಧನವಿಧೇಯಕಕ್ಕೆ ಅನುಮೋದನೆ ಪಡೆದು, ಕಲಾಪವನ್ನು ಅಂತ್ಯಗೊಳಿಸುವ ಸಾಧ್ಯತೆಯಿದೆ ಎನ್ನುವ ಮಾತುಗಳು ಕೇಳಿಬಂದಿದೆ.

4